ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

10

ಇಲಾಖೆ / ವಿಷಯ : DEPARTMENT / SUBJECT: ಮಳೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE 24/10/20

# ಮಳೆ: ಅಪ್ಪ-ಮಗ ಸೇರಿ ರಾಜ್ಯದಲ್ಲಿ ಮೂವರು ಬಲಿ

## ಹಲವು ಜಿಲ್ಲೆಗಳಲ್ಲಿ ಮಳೆ ಅಬ್ಬರ ಇಳಿಮುಖ

**ಬೆಂಗಳೂರು:** ಉತ್ತರಕರ್ನಾಟಕಸೇರಿದಂತೆ ರಾಜ್ಯದ 10ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಎರಡ್ಮೂರು ದಿನಗಳಿಂದ ಸುರಿಯುತ್ತಿದ್ದ ಮಳೆ ಶುಕ್ರವಾರ ಬಹುತೇಕ ಕ್ಷೀಣಿಸಿದೆ. ಈ ಮಧ್ಯೆ, ಮೈಸೂರು ಹಾಗೂ ಚಿಕ್ಕಬಳ್ಳಾಪುರದಲ್ಲಿ ಅಪ್ಪ-ಮಗ ಸೇರೆ ಮೂವರು ಮಳೆಗೆ ಬಲಿಯಾಗಿದ್ದಾರೆ.

ಚಿಕ್ಕಬಳ್ಳಾಪುರಜಿಲ್ಲೆಚಿಂತಾಮಣಿತಾಲೂಕಿನ ರವಿಕುಮಾರ್(45), ಪುತ್ರ ರಾಹುಲ್ (14) ಮಳೆಯಿಂದಾಗಿ ಮನೆ ಚಾವಣಿ ಕುಸಿದು ಮೃತಪಟ್ಟರೆ, ಮೈಸೂರು ಜಿಲ್ಲೆ ಕೆ. ಆರ್. ನಗರದ ರೈತ ರೇವಣ್ಣ (39) ಸಿಡಿಲುಬಡಿಲು ಸಾವಿಗೀಡಾಗಿದ್ದಾರೆ.

ಕೊಡಗು, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಗಳ ಕೆಲವೆಡೆಸಾಧಾರಣಮಳೆಯಾಗಿದೆ. ಕೊಡಗಿನಲ್ಲಿ ಇಡೀದಿನಬಿಟ್ಟುಬಿಟ್ಟುಮಳೆಯಾದರೆ, ದ.ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗದಲ್ಲಿ ತುಂತುರು ಮಳೆಯಾಗಿದೆ.

**26ರವರೆಗೆ ಭಾರೀ ಮಳೆ :** ಬಂಗಾಳ ಕೊಲ್ಲಿಯಲ್ಲಿಉಂಟಾಗಿರುವವಾಯುಭಾರ ಕುಸಿತಪರಿಣಾಮರಾಜ್ಯದಲ್ಲಿಅ.26ರವರೆಗೆ ಭಾರಿ ಮಳೆಯಾಗಲಿದ್ದು, ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳಿಗೆ 'ಯಲ್ಲೋ ಅಲರ್ಟ್' ನೀಡಲಾಗಿದೆ. ಗುಡುಗು, ಸಿಡಿಲು ಸಹಿತ ಮಳೆ ಆಗುವ ಸಾಧ್ಯತೆ ಇದೆ.